**ಸೂಚನೆಗಳು:**

1) ಅರ್ಹ ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ **www.teachersbank.co.in** ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ನಮೂನೆಗಳನ್ನು ಭರ್ತಿ ಮಾಡಿ, ವಿದ್ಯಾರ್ಹತೆಯ, ಜನ್ಮ ದಿನಾಂಕ, ಜಾತಿ/ವರ್ಗಗಳಿಗೆ ಸಂಬಂದಿಸಿದ ದಾಖಲೆಗಳನ್ನು ಆನ್‌ಲೈನ್ ಮೂಲಕ ಸಲ್ಲಿಸುವುದು.
2) ಅರ್ಜಿ ಸಲ್ಲಿಸಲು, ಸಂಬಂಧಪಟ್ಟ ದಾಖಲೆಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಹಾಗೂ ಶುಲ್ಕ ಪಾವತಿ ಮಾಡಲು ನಿಗದಿಪಡಿಸಿದ ದಿನಾಂಕ **: 21.11.2022 ರಿಂದ 08.12.2022**
3) ಅರ್ಜಿ ಶುಲ್ಕ **ರೂ.1,000.00 (ರೂ.ಒಂದು ಸಾವಿರ ಮಾತ್ರ)** ನ್ನು ಆನ್‌ಲೈನ್ ಮೂಲಕ ಪಾವತಿಸುವುದು. ಅರ್ಜಿ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ.
4) ಅಭ್ಯರ್ಥಿಗಳು ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಮಾತ್ರ ಅರ್ಜಿ ಸಲ್ಲಿಸಬಹುದು. ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳು ಸ್ವೀಕಾರಾರ್ಹವಲ್ಲ.
5) ಜೂನಿಯರ್ ಅಸಿಸ್ಟೆಂಟ್ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಜೂನಿಯರ್ ಅಸಿಸ್ಟೆಂಟ್/ಜೂನಿಯರ್ ಅಸಿಸ್ಟೆಂಟ್–ಟೆಕ್ನಿಕಲ್/ಜೂನಿಯರ್ ಅಸಿಸ್ಟೆಂಟ್–ಲೀಗಲ್ ಇದರಲ್ಲಿ ಯಾವುದಾದರೊಂದು ಹುದ್ದೆಗೆ ಮಾತ್ರ ಅರ್ಜಿ ಸಲ್ಲಿಸಬಹುದು.
6) ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕ **08.12.2022** ಕ್ಕೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ವಯೋಮಿತಿಯು ಕನಿಷ್ಠ 21 ವರ್ಷಗಳಾಗಿದ್ದು, ಗರಿಷ್ಠ ವಯೋಮಿತಿಯು ಈ ಕೆಳಗಿನಂತಿರತಕ್ಕದ್ದು:–

| | | |
|---|---|---|
| ಅ) | ಸಾಮಾನ್ಯ ವರ್ಗ | ಗರಿಷ್ಠ 35 ವರ್ಷ |
| ಆ) | ಹಿಂದುಳಿದ ಜಾತಿ/ಹಿಂದುಳಿದ ವರ್ಗ (2ಎ, 2ಬಿ, 3ಎ, 3ಬಿ ಪ್ರವರ್ಗ) | ಗರಿಷ್ಠ 38 ವರ್ಷ |
| ಇ) | ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ–(ಪ್ರವರ್ಗ 1) | ಗರಿಷ್ಠ 40 ವರ್ಷ |

7) ಅಭ್ಯರ್ಥಿಯನ್ನು ಲಿಖಿತ ಪರೀಕ್ಷೆ ಹಾಗೂ ಮೌಖಿಕ ಸಂದರ್ಶನದ ಮೂಲಕ ಆಯ್ಕೆ ಮಾಡಿ ಕೊಳ್ಳಲಾಗುವುದು.
ಲಿಖಿತ ಪರೀಕ್ಷೆಯಲ್ಲಿ ಒಟ್ಟು 200 ಅಂಕಗಳಿದ್ದು ಅದರಲ್ಲಿ ಕನ್ನಡ ಭಾಷೆಗೆ 50 ಅಂಕಗಳು, ಸಾಮಾನ್ಯ ಆಂಗ್ಲ ಭಾಷೆಗೆ 25 ಅಂಕಗಳು, ಸಾಮಾನ್ಯ ಜ್ಞಾನಕ್ಕೆ 25 ಅಂಕಗಳು, ಸಹಕಾರ ವಿಷಯಗಳಿಗೆ 50 ಅಂಕಗಳು, ಭಾರತದ ಸಂವಿಧಾನದ ವಿಷಯಕ್ಕೆ 25 ಅಂಕಗಳು ಮತ್ತು ಬ್ಯಾಂಕಿನ ಚಟುವಟಿಕೆಗೆ ಸಂಬಂಧಿಸಿದ ವಿಷಯಕ್ಕೆ 25 ಅಂಕಗಳು ಇರುತ್ತದೆ.
8) ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.
9) ಅಭ್ಯರ್ಥಿಯ ಅರ್ಹತೆಯ ಬಗ್ಗೆ ಬ್ಯಾಂಕಿನ ನೇಮಕಾತಿ ಸಮಿತಿಯ ಶಿಫಾರಸ್ಸು ಅಂತಿಮವಾಗಿರುತ್ತದೆ. ಮತ್ತು ಅಂತಿಮ ಆಯ್ಕೆಯು ಆಡಳಿತ ಮಂಡಳಿಯ ಅನುಮೋದನೆಗೆ ಒಳಪಟ್ಟಿರುತ್ತದೆ.
10) ಬದಲಾದ ಕಾಯ್ದೆ ಮತ್ತು ನಿಯಮಗಳಿಗನುಗುಣವಾಗಿ ಹೆಚ್ಚಿನ ಷರತ್ತುಗಳನ್ನು ವಿಧಿಸುವ ಅಧಿಕಾರ ಬ್ಯಾಂಕಿನ ಸಿಬ್ಬಂದಿ ನೇಮಕಾತಿ ಸಮಿತಿಗೆ ಇರುತ್ತದೆ.
11) ನೇಮಕಾತಿಯನ್ನು ಮುಂದೂಡುವ ಅಥವಾ ಅಗತ್ಯವಿದ್ದಲ್ಲಿ ರದ್ದುಪಡಿಸುವ ಪೂರ್ಣ ಅಧಿಕಾರ ಬ್ಯಾಂಕಿನ ಆಡಳಿತ ಮಂಡಳಿಗೆ ಇರುತ್ತದೆ
12) ನೇಮಕಾತಿಗೆ ಸಂಬಂಧಪಟ್ಟಂತೆ ಅಭ್ಯರ್ಥಿಗಳು ಸಲ್ಲಿಸುವ ಮಾಹಿತಿಗಳು ಅಥವಾ ದಾಖಲೆಗಳು ಸುಳ್ಳು ಎಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಯ ನೇಮಕಾತಿಯನ್ನು ತಿರಸ್ಕರಿಸಿ, ಕಾನೂನಿನನ್ವಯ ಹಾಗೂ ಬ್ಯಾಂಕಿನ ಉಪನಿಬಂಧನೆ/ಸೇವಾ ನಿಯಮದನ್ವಯ ಕಾನೂನು ಕ್ರಮ ಕೈಗೊಳ್ಳುವ ಅಧಿಕಾರ ಬ್ಯಾಂಕಿಗೆ ಇರುತ್ತದೆ.